# ಕರ್ನಾಟಕ ವಿಧಾನ ಪರಿಷತ್ತು

28

ರಾಜ್ಯದಲ್ಲಿ ದಿನದಿಂದ ದಿನಕ್ಕೆ ಡೆಂಗು ಉಲ್ಬಣಗೊಳ್ಳುತ್ತಿದೆ. ಆದರೆ ಇದನ್ನು ತಡೆಗಟ್ಟುವಲ್ಲಿ ಪ್ರಮುಖ ಪಾತ್ರ ವಹಿಸಬೇಕಾಗಿರುವ ಆರೋಗ್ಯ ಕಾರ್ಯಕರ್ತರ (ಆರೋಗ್ಯ ನಿರೀಕ್ಷಣಾಧಿಕಾರಿಗಳ) ಕೊರತೆ ಇದೆ. ಹೀಗಾಗಿ ಡೆಂಗು ನಿಯಂತ್ರಣ ಮೀರಿದೆ. ಆರೋಗ್ಯ ಕಾರ್ಯಕರ್ತರು ಮನೆ ಮನೆಗೆ ಭೇಟಿ ನೀಡಿ ಲಾರ್ವಾ ಸರ್ವೆ ಮಾಡಿ ಮನೆ ಸುತ್ತಮುತ್ತ ಪರಿಸರದ ಸ್ವಚ್ಛತೆ ಮತ್ತು ಸೊಳ್ಳೆ ಇರದಂತೆ ಎಚ್ಚರಿಕೆ ವಹಿಸುವಂತೆ ಸಾರ್ವಜನಿಕರಿಗೆ ಅರಿವು ಮೂಡಿಸುತ್ತಾರೆ. ಆದರೆ ಕಳೆದ 2016ರ ಬಳಿಕ ಆರೋಗ್ಯ ಇಲಾಖೆಯಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿಗಳ ನೇಮಕಾತಿಯೇ ನಡೆದಿಲ್ಲ. 2021-22ನೇ ಸಾಲಿನ ಅಂಕಿ-ಅಂಶಗಳ ಪ್ರಕಾರ ರಾಜ್ಯದ 31 ಜಿಲ್ಲೆಗಳಲ್ಲಿ ಒಟ್ಟು 5944 ಆರೋಗ್ಯ ನಿರೀಕ್ಷಣಾಧಿಕಾರಿಗಳ ಮಂಜೂರಾತಿಯಾಗಿದೆ. ಈ ಪೈಕಿ 3095 ಜನ ಕಾರ್ಯನಿರ್ವಹಿಸುತ್ತಿದ್ದು, 2849 ಹುದ್ದೆಗಳು ಖಾಲಿ ಇವೆ. 2016ರ ಬಳಿಕ ಇದುವರೆಗೆ ಮತ್ತೆ ಸುಮಾರು 300ಕ್ಕೂ ಅಧಿಕ ಆರೋಗ್ಯ ನಿರೀಕ್ಷಣಾಧಿಕಾರಿಗಳು ನಿವೃತ್ತರಾಗಿದ್ದಾರೆ. ವಿವಿಧ ಜಿಲ್ಲೆಗಳಲ್ಲಿ 32 ಸರಕಾರಿ, 475 ಖಾಸಗಿಯಾಗಿ ಒಟ್ಟು 507 ಪ್ಯಾರಾ ಮೆಡಿಕಲ್ ಕಾಲೇಜುಗಳಿಂದ ಪ್ರತಿವರ್ಷ ಒಂದು ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ತೇರ್ಗಡೆಯಾಗಿ ನಿರುದ್ಯೋಗಿಯಾಗುತ್ತಿದ್ದಾರೆ.

ಒಂದೆಡೆ ಸರ್ಕಾರ ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ ಆರೋಗ್ಯ ನಿರೀಕ್ಷಣಾಧಿಕಾರಿಗಳ ಹುದ್ದೆಗಳ ಭರ್ತಿ ಮಾಡುತ್ತಿಲ್ಲ. ಇನ್ನೊಂದೆಡೆ ವಯೋಮಿತಿ ಮೀರುತ್ತಿರುವ ಉದ್ಯೋಗಾಂಕ್ಷಿಗಳು ಖಾಸಗಿಯಾಗಿ ಉದ್ಯೋಗವೂ ಇಲ್ಲದೆ ಅತಂತ್ರಗೊಂಡಿದ್ದಾರೆ. ಸಾಂಕ್ರಾಮಿಕ ರೋಗಗಳಾದ ಡೆಂಗು ಚಿಕೂನ್ ಗುನ್ಯಾ, ಮಲೇರಿಯಾ ರೋಗಗಳನ್ನು ನಿಯಂತ್ರಿಸಲು ಸರ್ಕಾರ ನಗರ ಮತ್ತು ಗ್ರಾಮಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ತೆರೆದು ಅಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿಗಳನ್ನು ನಿಯೋಜಿಸುವ ಯೋಜನೆ ರೂಪಿಸಿದೆ. ಆದರೆ, ಕಳೆದ 8 ವರ್ಷಗಳಿಂದ ಆರೋಗ್ಯ ನಿರೀಕ್ಷಣಾಧಿಕಾರಿಗಳ ನೇಮಕವಾಗದೆ ಇರುವುದರಿಂದ ಸಾಂಕ್ರಾಮಿಕ ಈ ರೋಗ ಉಲ್ಬಣಗೊಳ್ಳಲು ಕಾರಣ ಎನ್ನಲಾಗುತ್ತಿದೆ.

ಖಾಲಿ ಇರುವ ಹುದ್ದೆಗಳ ಭರ್ತಿಗಾಗಿ ಕಳೆದ ಮಾರ್ಚ್ 2022 ರಂದು 2692 ಹುದ್ದೆಗಳ ನೇಮಕಾತಿಗೆ ಹಣಕಾಸು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದರು. ಆದರೆ, ಸರ್ಕಾರ ಹಣಕಾಸು ಇಲಾಖೆಯಿಂದ ಅನುಮೋದನೆ ಪಡೆಯಲಿಲ್ಲ. ಸೂಕ್ತ ಪ್ರಮಾಣದಲ್ಲಿ ಆರೋಗ್ಯ ನಿರೀಕ್ಷಾಧಿಕಾರಿಗಳ ನೇಮಕ ಮಾಡದ ಹೊರತು ಡೆಂಗ್ಯುನಂತಹ ಸಾಂಕ್ರಾಮಿಕ ರೋಗಗಳನ್ನು ಹತೋಟಿಗೆ ತರಲು ಸಾಧ್ಯವಿಲ್ಲ. ಆದ್ದರಿಂದ ಸರ್ಕಾರ ಕೂಡಲೇ ಖಾಲಿ ಹುದ್ದೆಗಳ ನೇಮಕಾತಿಗೆ ಅನುಮತಿ ನೀಡಿ ಡೆಂಗ್ಯೂನಂತಹ ರೋಗಗಳನ್ನು ಹತೋಟಿಗೆ ತರಲು ಮುಂದಾಗಬೇಕೆಂದು ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೇಶವ ಪ್ರಸಾದ್ ಎಸ್. ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಉತ್ತರ:-

*****

**ಉತ್ತರ:-**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ನಾರ್ಮ್ಸ್ ಪ್ರಕಾರ ಸಮತಟ್ಟು ಪ್ರದೇಶದಲ್ಲಿ 30000 ಜನಸಂಖ್ಯೆಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಹಾಗೂ ಗುಡ್ಡಗಾಡು ಪ್ರದೇಶದಲ್ಲಿ 20000 ಜನಸಂಖ್ಯೆಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಿದ್ದು, 5000 ಜನಸಂಖ್ಯೆಗೆ ಒಂದು ಉಪಕೇಂದ್ರವನ್ನು ಸ್ಥಾಪನೆ ಮಾಡಲಾಗಿರುತ್ತದೆ. ಒಂದು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಬರುವ ಎರಡು ಉಪಕೇಂದ್ರಕ್ಕೆ ಒಬ್ಬರು ಆರೋಗ್ಯ ನಿರೀಕ್ಷಣಾಧಿಕಾರಿಗಳು ಕರ್ತವ್ಯ ನಿರ್ವಹಿಸಬೇಕಾಗಿರುತ್ತದೆ. ಹಾಲಿ ಆರೋಗ್ಯ ನಿರೀಕ್ಷಣಾಧಿಕಾರಿಗಳು ಸಾಂಕ್ರಾಮಿಕ, ಅಸಾಂಕ್ರಾಮಿಕ ರೋಗಗಳು, ಲಸಿಕಾ ಕಾರ್ಯಕ್ರಮಗಳ

.....2

ಬಗ್ಗೆ ಹಾಗೂ ಎಲ್ಲಾ ವಯೋಮಾನದ ಜನ ಸಮುದಾಯಕ್ಕೆ ಉತ್ತಮ ಆರೋಗ್ಯವನ್ನು ಹೊಂದಲು ಜಾರಿಗೊಳಿಸಲಾಗಿರುವ ಎಲ್ಲಾ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸುವುದು ಮತ್ತು ಅನುಷ್ಠಾನಗೊಳಿಸುವುದು ಮತ್ತು ಇತರೆ ಆರೋಗ್ಯ ಚಟುವಟಿಕೆಗಳ ಕೆಲಸವನ್ನು ನಿರ್ವಹಿಸುತ್ತಾರೆ.

ಇಲಾಖೆಯಲ್ಲಿ 5,944 ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳು ಮಂಜೂರಾತಿಯಾಗಿದ್ದು, ಅದರಲ್ಲಿ 3,095 ಆರೋಗ್ಯ ನಿರೀಕ್ಷಣಾಧಿಕಾರಿಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿದ್ದು, 2849 ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳು ಖಾಲಿ ಇರುತ್ತವೆ. ಸದರಿ ಹುದ್ದೆಗಳು ಖಾಲಿ ಇದ್ದರೂ ಸಹ ಈ ಹಿಂದೆ ಕೋವಿಡ್-19 ಸಾಂಕ್ರಾಮಿಕ ರೋಗವು ಹರಡಿದ್ದ ಸಮಯದಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಆರೋಗ್ಯ ನಿರೀಕ್ಷಣಾಧಿಕಾರಿಗಳು ಉತ್ತಮ ಕಾರ್ಯನಿರ್ವಹಿಸಿ ಕೋವಿಡ್-19 ಸಾಂಕ್ರಾಮಿಕ ರೋಗವನ್ನು ಹತೋಟಿಯಲ್ಲಿಡಲು ಪ್ರಮುಖ ಪಾತ್ರವನ್ನು ನಿರ್ವಹಿಸಿರುವುದು ಶ್ಲಾಘನೀಯವಾಗಿರುತ್ತದೆ ಮತ್ತು ಸಾಕ್ಷಿ ಬದ್ಧವಾಗಿರುತ್ತದೆ. ಇದರ ಜೊತೆಗೆ ಆರೋಗ್ಯ ನಿರೀಕ್ಷಣಾಧಿಕಾರಿಗಳ ಖಾಲಿ ಹುದ್ದೆಗಳ ಸ್ಥಳದಲ್ಲಿ ಇತರೆ ಆರೋಗ್ಯ ಕೇಂದ್ರದ ಆರೋಗ್ಯ ನಿರೀಕ್ಷಣಾಧಿಕಾರಿಗಳನ್ನು ಕಾರ್ಯವ್ಯವಸ್ಥೆ ಮಾಡಲಾಗಿರುತ್ತದೆ ಮತ್ತು ಇದರ ಜೊತೆಗೆ ಸಮುದಾಯ ಆರೋಗ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು ಮತ್ತು ಆಶಾ ಕಾರ್ಯಕರ್ತರು ಸಹ ಕಾರ್ಯನಿರ್ವಹಿಸುತ್ತಿರುತ್ತಾರೆ. ಹಾಲಿ ಖಾಲಿ ಹುದ್ದೆಗಳಿಂದ ಯಾವುದೇ ಆರೋಗ್ಯ ಕಾರ್ಯಕ್ರಮಗಳಿಗೆ ತೊಂದರೆಯಾಗದಂತೆ ಸಾಂಕ್ರಾಮಿಕ ರೋಗಗಳನ್ನು ತಡೆಯುವಲ್ಲಿ ಹಾಲಿ ಕಾರ್ಯನಿರತ ಆರೋಗ್ಯ ನಿರೀಕ್ಷಣಾಧಿಕಾರಿಗಳು ಹಾಗೂ ಇತರೆ ವಿವಿಧ ಅರೆವೈದ್ಯಕೀಯ ಆರೋಗ್ಯ ಸಿಬ್ಬಂದಿಗಳಿಂದ ಸಮರ್ಪಕವಾಗಿ ಉತ್ತಮ ಆರೋಗ್ಯ ಸೇವೆಯನ್ನು ಸಾರ್ವಜನಿಕರಿಗೆ ನೀಡಲಾಗುತ್ತಿದೆ.

ಮುಂದುವರೆದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಆರೋಗ್ಯ ನಿರೀಕ್ಷಣಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.

ಸಂಖ್ಯೆ: ಆಕುಕ 187 ಹೆಚ್ಎಸ್ಎಂ 2024

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು